ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವ

**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

ಸಂಖ್ಯೆ:ಕಪಂರಾಆ/ಅಭಿವೃದ್ಧಿ/144/2021 ದಿನಾಂಕ:30.10.2021

## ಸುತ್ತೋಲೆ

**ವಿಷಯ:** ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಗ್ರಾಮ ಪಂಚಾಯತಿಗಳಲ್ಲಿ "ಮಕ್ಕಳ ಹಕ್ಕುಗಳ ಗ್ರಾಮ ಸಭೆ" ನಡೆಸುವ ಕುರಿತು.

**ಉಲ್ಲೇಖ:** (1)ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993, ಅಧ್ಯಾಯ IIರ ಪ್ರಕರಣ 3(ಎಚ್)(2) )(i) ಮತ್ತು ಅಧ್ಯಾಯ IVರ ಪ್ರಕರಣ 61-ಎ

(2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 367 ಗ್ರಾಪಂಅ 2006 ದಿನಾಂಕ: 18-09-2006

(3) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 638 ಗ್ರಾಪಂಅ 2007 ದಿನಾಂಕ 30-10-2007

(4) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 837 ಗ್ರಾಪಂಅ 2019 ದಿನಾಂಕ 25-10-2019

(5) ಸರ್ಕಾರದ ಸುತ್ತೋಲೆ ಸಂಖ್ಯೆ: ಕಪಂರಾಆ/ಅಭಿವೃದ್ಧಿ/93/2020 ದಿನಾಂಕ 04-11-2020

(6) ಸರ್ಕಾರದ ಸುತ್ತೋಲೆ ಸಂಖ್ಯೆ: ಕಪಂರಾಆ/ಅಭಿವೃದ್ಧಿ/93/2020 ದಿನಾಂಕ 02-02-2021

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರವು ಮಕ್ಕಳ ಹಕ್ಕುಗಳ ರಕ್ಷಣೆ ಹಾಗೂ ಮಕ್ಕಳ ಭಾಗವಹಿಸುವಿಕೆ ಹಕ್ಕು ಹಿನ್ನೆಲೆಯಲ್ಲಿ ಉಲ್ಲೇಖ(1)ರ ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮದ ಅಧ್ಯಾಯ II ರ ಪ್ರಕರಣ 3(ಎಚ್)(2)(I)ರಲ್ಲಿ ಉಲ್ಲೇಖಿಸಿರುವ ನಿರ್ದೇಶನದ ಮೇರೆಗೆ 2006ರಿಂದ ಪ್ರತಿ ವರ್ಷವೂ ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನು ಗ್ರಾಮ ಪಂಚಾಯತಿಗಳಿಂದ ನಡೆಸಿಕೊಂಡು ಬರಲಾಗುತ್ತಿದೆ.

ಉಲ್ಲೇಖ(2)ರ ಸರ್ಕಾರದ ಸುತ್ತೋಲೆಯಲ್ಲಿ ಪ್ರತಿ ವರ್ಷ ನವೆಂಬರ್ 13 ರಿಂದ 30ರವರೆಗೆ ಮಕ್ಕಳ ಹಕ್ಕುಗಳ ಸಪ್ತಾಹವನ್ನು ಹಮ್ಮಿಕೊಳ್ಳುವಂತೆ ಹಾಗೂ ಈ ದಿನಗಳಲ್ಲಿ ಒಂದು ದಿನ ಮಕ್ಕಳ ಗ್ರಾಮ ಸಭೆಯನ್ನು ಏರ್ಪಡಿಸಲು ನಿರ್ದೇಶನ ನೀಡಲಾಗಿರುತ್ತದೆ. ಉಲ್ಲೇಖ(3)ರ ಸರ್ಕಾರದ ಸುತ್ತೋಲೆಯಲ್ಲಿ ಮಕ್ಕಳ ಗ್ರಾಮ ಸಭೆಯ ರೂಪುರೇಷೆಗಳ ಬಗ್ಗೆ ವಿವರವಾದ ಮಾರ್ಗಸೂಚಿಯನ್ನು ನೀಡಲಾಗಿರುತ್ತದೆ. ಉಲ್ಲೇಖ(4)ರ ಸರ್ಕಾರದ ಸುತ್ತೋಲೆಯಲ್ಲಿ ಮಕ್ಕಳ ವಿಶೇಷ ಗ್ರಾಮ ಸಭೆಗಳನ್ನು ನಡೆಸುವಾಗ ಕಡ್ಡಾಯವಾಗಿ ಪಾಲಿಸಬೇಕಾದ ಅಂಶಗಳನ್ನು ತಿಳಿಸಲಾಗಿದೆ.

ಉಲ್ಲೇಖ(5)ರ ಸರ್ಕಾರದ ಮೂಲಕ ವಿಶ್ವ ಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳು ಹಾಗೂ ಮಕ್ಕಳಿಗೆ ಸಂಬಂಧಿಸಿದ ಸಮಗ್ರ ಅಭಿವೃದ್ಧಿಯ ಅಂಶಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ 'ಮಕ್ಕಳ ಸ್ನೇಹಿ ಮತ್ತು ಮಕ್ಕಳ ಸುರಕ್ಷಿತ' ಪಂಚಾಯತಿಗಳನ್ನಾಗಿಸಲು 14 ನವಂಬರ್ 2020 ರಿಂದ 24 ಜನವರಿ 2021ರವೆಗೆ 'ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ'ವನ್ನು ನಡೆಸಲು ಹಾಗೂ ಉಲ್ಲೇಖ(6)ರ ಸುತ್ತೋಲೆ ಮೂಲಕ ಸದರಿ ಅಭಿಯಾನವನ್ನು 24-01-2021 ರಿಂದ 28-02-2021ರವರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

ಈ ವರ್ಷವೂ 14 ರಿಂದ 30 ನವಂಬರ್ 2021ರಲ್ಲಿ ಉಲ್ಲೇಖಿತ ಸುತ್ತೋಲೆ (2) ರಿಂದ (4) ರಲ್ಲಿ ತಿಳಿಸಿರುವಂತೆ ಮಕ್ಕಳ ಹಕ್ಕುಗಳ ಸಪ್ತಾಹವನ್ನು ಹಮ್ಮಿಕೊಂಡು ಈ ದಿನಗಳಲ್ಲಿ ವಿಶೇಷವಾಗಿ ಒಂದು ದಿನ

ಉಲ್ಲೇಖಿತ(5)ರ ಸುತ್ತೋಲೆಯಲ್ಲಿ ವಿವರಿಸಿರುವಂತೆ ಎಲ್ಲಾ ಕ್ರಮಗಳನ್ನು ಅನುಸರಿಸಿ ಈ ಕೆಳಕಂಡಂತೆ **"ಮಕ್ಕಳ ಹಕ್ಕುಗಳ ಗ್ರಾಮ ಸಭೆ"** ಯನ್ನು ನಡೆಸಲು ಆದೇಶಿಸಿದೆ.

- "ಮಕ್ಕಳ ಹಕ್ಕುಗಳ ಗ್ರಾಮ ಸಭೆ"ಗಳನ್ನು ನಡೆಸಲು ಪೂರ್ವ ಸಿದ್ಧತೆ ಸಭೆಯನ್ನು ನಡೆಸುವುದು. ಸದರಿ ಸಭೆಯಲ್ಲಿ ಕ್ರಿಯಾ ಯೋಜನೆ/ವೇಳಾ ಪಟ್ಟಿಯನ್ನು ಸಿದ್ಧಪಡಿಸಿ ಅನುಷ್ಠಾನಗೊಳಿಸುವುದು.
- ಪ್ರತಿ ವಾರ್ಡ್ ಮಟ್ಟದ ಮತ್ತು ಗ್ರಾಮ ಪಂಚಾಯತಿ ಮಟ್ಟದ ಮಕ್ಕಳ ಪರಿಸ್ಥಿತಿಯನ್ನು (2020-2021 ನೇ ಸಾಲಿನ ಹಾಗೂ ಅಕ್ಟೋಬರ್ 2021ರ ಅಂತ್ಯದವರೆಗೆ ಇರುವಂತೆ) ಸುತ್ತೋಲೆ(5)ರಲ್ಲಿ ನೀಡಲಾದ ಮಾದರಿ ಚಾರ್ಟ್ ನಲ್ಲಿ ಸಂಗ್ರಹಿಸಿ ಇಲಾಖೆಯ ಪಂಚತಂತ್ರದಲ್ಲಿ ತಂತ್ರಾಂಶದಲ್ಲಿ ಅಳವಡಿಸುವುದು.
- ಗ್ರಾಮ ಪಂಚಾಯಿತಿ ಶಿಕ್ಷಣ ಕಾರ್ಯಪಡೆಯಲ್ಲಿ ಇರುವ ಒಬ್ಬ ಸದಸ್ಯರನ್ನು "ಪಂಚಾಯಿತಿ ಬಾಲ ಮಿತ್ರ" ಎಂದು ಘೋಷಿಸಿ ಅವರುಗಳು ತಮ್ಮ ಜವಬ್ದಾರಿಯನ್ನು ನಿರ್ವಹಿಸಲು ತಿಳಿಸುವುದು.
- ಮಕ್ಕಳ ಹಕ್ಕುಗಳ ಗ್ರಾಮ ಸಭೆಯ ಪೂರ್ವದಲ್ಲಿ ಮಕ್ಕಳ ಸಮಸ್ಯೆಗಳ/ಬೇಡಿಕೆಗಳ/ಪ್ರಶ್ನೆಗಳನ್ನು ಪಡೆಯಲು ಸುತ್ತೋಲೆ(5)ರಲ್ಲಿ ತಿಳಿಸಿರುವಂತೆ 'ಮಕ್ಕಳ ಧನಿ' ಪೆಟ್ಟಿಗೆ ವ್ಯವಸ್ಥೆ ಮಾಡಿ ಮಾದರಿ ಕೋರಿಕೆ ಪತ್ರದ ಮೂಲಕ ಪಡೆಯುವುದು.
- ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನು ಸರ್ಕಾರಿ, ಖಾಸಗಿ ಶಾಲಾ/ಕಾಲೇಜು ಮಕ್ಕಳು ಸೇರಿದಂತೆ ಶಾಲೆಯಿಂದ ಹೊರಗುಳಿದ ಎಲ್ಲ ವರ್ಗದ ಮಕ್ಕಳಿಗೆ ಭಾಗವಹಿಸಲು ಅನುಕೂಲವಾಗುವಂತೆ ಸೂಕ್ತವಾದ ಸ್ಥಳದ ವ್ಯವಸ್ಥೆ ಮಾಡುವುದು.
- ಮಕ್ಕಳ ಹಕ್ಕುಗಳ ಗ್ರಾಮ ಸಭೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮವಹಿಸುವುದು ಹಾಗೂ ಈ ಹಿನ್ನೆಲೆಯಲ್ಲಿ ಅಧಿಕಾರಿಗಳ ಭಾಗವಹಿಸುವಿಕೆಗೆ ಅನುಕೂಲವಾಗುವಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ದಿನಾಂಕಗಳನ್ನು ನಿಗದಿಗೊಳಿಸುವುದು.
- ಸುತ್ತೋಲೆ(5)ರಲ್ಲಿ ತಿಳಿಸಿರುವಂತೆ ವಿವಿಧ ಮೂಲಗಳಿಂದ ಬಂದ ಮಕ್ಕಳ ಸಮಸ್ಯೆಗಳ/ಬೇಡಿಕೆಗಳ/ಪ್ರಶ್ನೆಗಳನ್ನು ಸದರಿ ಸುತ್ತೋಲೆಯಲ್ಲಿನ ನಮೂನೆಗಳಲ್ಲಿ ಕ್ರೋಡೀಕರಿಸುವುದು ಹಾಗೂ ಕ್ರಿಯಾ ಯೋಜನೆ ರಚಿಸಿ ಗ್ರಾಮ ಪಂಚಾಯಿತಿಯಿಂದ ಮತ್ತು ಸಂಬಂಧಪಟ್ಟ ಇಲಾಖೆಯಿಂದ ಅನುಷ್ಠಾನಗೊಳಿಸುವುದು. ಕ್ರಿಯಾ ಯೋಜನೆ ಮತ್ತು ಅನುಷ್ಠಾನದ ವರದಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ಅಳವಡಿಸುವುದು.
- ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಪಂಚಾಯತ್‌ರಾಜ್ ಆಯುಕ್ತಾಲಯ ಬೆಂಗಳೂರುವತಿಯಿಂದ ಬೆಂಗಳೂರು, ಮೈಸೂರು,ಬೆಳಗಾವಿ ಮತ್ತು ಗುಲಬರ್ಗಾ ವಿಭಾಗಗಳ ಉಪನಿರ್ದೇಶಕರುಗಳು ಉಲ್ಲೇಖಿತ ಸುತ್ತೋಲೆ(5)ರಲ್ಲಿ ತಿಳಿಸಿರುವಂತೆ **ಮಕ್ಕಳ ಹಕ್ಕುಗಳ ಗ್ರಾಮ ಸಭೆ**ಗಳನ್ನು ಪರಿಣಾಮಕಾರಿಯಾಗಿ ನಡೆಸಲು ನಿರ್ದೇಶನ ನೀಡುವುದು.
- ರಾಜ್ಯ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ತಮ್ಮ ಇಲಾಖೆಗಳಿಂದ **ಮಕ್ಕಳ ಹಕ್ಕುಗಳ ಗ್ರಾಮ ಸಭೆ**ಯಲ್ಲಿ ಭಾಗವಹಿಸಲು ಹಾಗೂ ಸಮನ್ವಯತೆಗಾಗಿ ಸಂಬಂದಿಸಿದಂತೆ ಜಿಲ್ಲಾ ಪಂಚಾಯತಿ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟದ ತಮ್ಮ ಇಲಾಖೆಯ ಅಧೀನ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವುದು.
- **"ಮಕ್ಕಳ ಹಕ್ಕುಗಳ ಸಪ್ತಾಹ"ದ ಮೂಲಕ ಒತ್ತು ಕೊಡಬೇಕಾದ ಅಂಶಗಳು/ ಗುರಿಗಳು:**
    - ಶೇಕಡ 100 ರಷ್ಟು ಮಕ್ಕಳ ಜನನ ನೋಂದಣಿ ಮತ್ತು ಜನನ ಪ್ರಮಾಣ ಪತ್ರಗಳ ವಿತರಣೆ
    - ಶೇಕಡ 100 ರಷ್ಟು ಮಕ್ಕಳಿಗೆ ಚುಚ್ಚು ಮದ್ದು.
    - ಶೇಕಡ 100 ರಷ್ಟು 3 ರಿಂದ 6 ವರ್ಷದ ಮಕ್ಕಳು ಅಂಗನವಾಡಿ/ಪೂರ್ವ ಪ್ರಾಥಮಿಕ ಕೇಂದ್ರಗಳಿಗೆ ದಾಖಲಾತಿ ಹಾಗೂ ಹಾಜರಾತ
    - ಶೇಕಡ 100 ರಷ್ಟು ಮಕ್ಕಳಿಗೆ ಪೌಷ್ಟಿಕ ಆಹಾರ.
    - ಗ್ರಾಮ ಪಂಚಾಯತಿಯಲ್ಲಿನ ತೀವ್ರ ಅಪೌಷ್ಟಿಕ ಮತ್ತು ಮಧ್ಯಮ ತೀವ್ರ ಅಪೌಷ್ಟಿಕ ಮಕ್ಕಳನ್ನು ಪತ್ತೆ ಹಚ್ಚುವುದು ಹಾಗೂ ಅಂಥಹ ಮಕ್ಕಳಿಗೆ ಪೌಷ್ಟಿಕ ಅಂಶವನ್ನು ಒದಗಿಸಲು ಪೂರೈಸಲು ಕ್ರಮ ಕೈಗೊಳ್ಳುವುದು.
    - ಶೇಕಡ 100 ರಷ್ಟು 6ರಿಂದ 14 ವರ್ಷದ ಮಕ್ಕಳು ಶಾಲೆಗೆ ದಾಖಲಾತಿ ಹಾಗೂ ಹಾಜರಾತಿ
    - ಮಕ್ಕಳು ಮತ್ತು ಕಿಶೋರಾವಸ್ಥೆಯ ಕಾರ್ಮಿಕತೆಯಿಂದ ಮುಕ್ತತೆ (ಬಾಲ ಕಾರ್ಮಿಕತೆ ಯಿಂದ ಮುಕ್ತತೆ)

- ಶೇಕಡ 0 ಬಾಲ್ಯ ವಿವಾಹ ಪ್ರಕರಣ
- 18 ವರ್ಷ ಪೂರ್ಣಗೊಳ್ಳದ ಶೇಕಡ 100 ರಷ್ಟು ಹೆಣ್ಣು ಮಕ್ಕಳಿಗೆ ಶಿಕ್ಷಣ
- ಮಕ್ಕಳ ಜೀತ ಪದ್ಧತಿ ಮುಕ್ತತೆ
- ಮಕ್ಕಳ ಸಾಗಾಟ ತಡೆ
- ಮಕ್ಕಳ ಸುರಕ್ಷತೆ
- ಶಿಶು ಮರಣ ಪ್ರಮಾಣ ತಗ್ಗಿಸುವುದು.

ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಉಲ್ಲೇಖಿತ ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಕಡ್ಡಾಯವಾಗಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ನಡೆಸಲು ಹಾಗೂ ಸಭೆಯನ್ನು ಆಯೋಸಿದ ಬಗ್ಗೆ ಉತ್ತಮ ಫೋಟೋಗಳನ್ನು ವರದಿಗಳನ್ನು ಹಾಗೂ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳ ಮೂಲಕ ತಯಾರಿಸಲಾದ ಕ್ರಿಯಾ ಯೋಜನೆ ಮತ್ತು ಅನುಷ್ಠಾನದ ವರದಿಯನ್ನು ಪಂಚತಂತ್ರ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಲು ಸೂಕ್ತ ಕ್ರಮವಹಿಸುವುದು.

7.10.2021

ನಿರ್ದೇಶಕರು(ಅಭಿವೃದ್ಧಿ)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

**ಇವರಿಗೆ:**

1. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಆಡಳಿತಾಧಿಕಾರಿಗಳು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
4. ಕಛೇರಿ ಪ್ರತಿ

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ ರವರ ಆಪ್ತ ಕಾರ್ಯದರ್ಶಿ
4. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಯೋಜನಾ ಕಾರ್ಯಕ್ರಮಗಳ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ
6. ಸಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ. ಇವರ ಆಪ್ತ ಕಾರ್ಯದರ್ಶಿ.
7. ಸಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆರವರ ಆಪ್ತ ಕಾರ್ಯದರ್ಶಿ.

10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ
11. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ
12. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿ
13. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
14. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ
15. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿ
16. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
17. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಆಯುಕ್ತರು, ಪಂಚಾಯರ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತ ಸಹಾಯಕರು, ಕೆ.ಜಿ.ರಸ್ತೆ, ಬೆಂಗಳೂರು.
19. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಸರಭರಾಜು ಮತ್ತು ನೈರ್ಮಲ್ಯ ಇಲಾಖೆ, ಇವರ ಆಪ್ತ ಸಹಾಯಕರು
20. ಆಯುಕ್ತರು, ಕಾರ್ಮಿಕ ಇಲಾಖೆ , ಕಾರ್ಮಿಕ ಭವನ, ಬೆಂಗಳೂರು.
21. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ.
22. ನಿರ್ದೇಶಕರು, ಮಕ್ಕಳ ಸಂರಕ್ಷಣಾ ನಿರ್ದೇಶನಾಲಯ / ಐ.ಸಿ.ಪಿ.ಎಸ್, ಕರ್ನಾಟಕ ಸರ್ಕಾರ
23. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು
24. ನಿರ್ದೇಶಕರು, ವಿಕಲಚೇತನರು ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ, ಬೆಂಗಳೂರು
25. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ